ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 08.

ಆ) ಹುಬ್ಬಳ್ಳಿ ನಗರದಲ್ಲಿ 8 ಸರ್ಕಾರಿ ಶಿಶುವಿಹಾರ ಶಾಲೆಗಳಿದ್ದು, ಹುಬ್ಬಳ್ಳಿ ನಗರದ ಕೊಳಚೆ ಪ್ರದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಕ್ಕಳ ವಿದ್ಯಾಭ್ಯಾಸದ ಅನುಕೂಲಕ್ಕಾಗಿ 91-92ನೇ ಸಾಲಿನಲ್ಲಿ, ಮಂಜೂರಾದ ಪೂರ್ವ ಪ್ರಾಥಮಿಕ ಶಾಲೆಯನ್ನು ರಾಣೆಬೆನ್ನೂರು ಕೊಟ್ಯಾಳದಿಂದ ಹುಬ್ಬಳ್ಳಿ ನಗರದ ಕೊಳಚೆ ಪ್ರದೇಶಕ್ಕೆ ಸ್ಥಳಾಂತರಿಸಿದೆ. ರಾಜ್ಯದ ಕೊಳಚೆ ಪ್ರದೇಶಗಳಲ್ಲಿ ಕನ್ನಡ ಶಿಶುವಿಹಾರಗಳನ್ನು ಸ್ಥಾಪಿಸುವ ಸಂಬಂಧದಲ್ಲಿ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಂದ ಪ್ರಸ್ತಾವನೆ ಸಲ್ಲಿಸಲು ಸುತ್ತೋಲೆ ನೀಡಲಾಗಿದೆ. ರಾಜ್ಯದ ಕೆಲವು ಜಿಲ್ಲೆಗಳಿಂದ ಕನ್ನಡ ಶಿಶುವಿಹಾರ ಸ್ಥಾಪನೆಗೆ ಪ್ರಸ್ತಾವನೆ ಪಡೆದು ಕ್ರಮ ತೆಗೆದುಕೊಳ್ಳಲಾಗುವುದು.

ಧಾರವಾಡ ಜಿಲ್ಲೆಯಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು

854 - ಶ್ರೀ ಅಶೋಕ್ ಕಾಟವೆ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಾದ್ಯಂತ ಸುಮಾರು 1200 ಕ್ಕಿಂತಲೂ ಹೆಚ್ಚು ಪ್ರಾಥಮಿಕ ಶಾಲಾ ಶಿಕ್ಷಕರ ಖಾಲಿ ಇದ್ದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) 1995-96ನೇ ಸಾಲಿನಲ್ಲಿ ಭರ್ತಿ ಮಾಡಲಾಗುವ ಹುದ್ದೆಗಳ ಸಂಖ್ಯೆ ಎಷ್ಟು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಧಾರವಾಡ ಜಿಲ್ಲೆಯಲ್ಲಿ 1214 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು 1995-96ನೇ ಸಾಲಿನಲ್ಲಿ ತುಂಬಲು ಉದ್ದೇಶಿಸಿದೆ. ಖಾಲಿ ಇರುವ ಹುದ್ದೆಗಳ ಪೈಕಿ ಶೇಕಡ 50 ರಷ್ಟನ್ನು ವಿಶೇಷ ನೇಮಕಾತಿ ಮೂಲಕ (29 ವರ್ಷ ವಯಸ್ಸು ಮೀರಿದವರಿಂದ) ಹಾಗೂ ಉಳಿದ 50 ರಷ್ಟನ್ನು ಸಾಮಾನ್ಯ ನೇಮಕಾತಿ ಮೂಲಕ ಎರಡನೇ ಹಂತದಲ್ಲಿ ತುಂಬಲಾಗುವುದು.

ವಿಜಾಪುರ ಜಿಲ್ಲಾ ಪಂಚಾಯತ್‌ಗೆ 1995-96ನೇ ಸಾಲಿನ ಶೈಕ್ಷಣಿಕ ಕಟ್ಟಡಗಳ ಸಲುವಾಗಿ ಅನುಧಾನ

855 - ಶ್ರೀ ಬಸವನಗೌಡಪಾಟೀಲ್ (ವಿಜಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪುರ ನಗರದ ಪ್ರಾಥಮಿಕ ಶಾಲೆಗಳ ದುಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಲ್ಲಿ ಪರಿಹಾರ ಕ್ರಮಗಳೇನು;